(17)

## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಇವರು ನಿಯಮ 330 ರ ಅಡಿಯಲ್ಲಿ ನೀಡಿರುವ ಸೂಚನೆಗೆ ಸರ್ಕಾರದ ಉತ್ತರ.

---

**ವಿಷಯ:** ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ, ಕಳೆದ 60 ವರ್ಷಗಳಿಂದ ಈ ಭಾಗದ ಜನರಿಗೆ ವೈದ್ಯಕೀಯ ಸೌಲಭ್ಯಗಳನ್ನು ನೀಡುತ್ತಾ ಬಂದಿರುತ್ತದೆ. ಈ ಸಂಸ್ಥೆಗೆ ಒಳರೋಗಿ ಹಾಗೂ ಹೊರ ರೋಗಿಯಾಗಿ ಸುತ್ತಮುತ್ತಲಿನ ಜಿಲ್ಲೆಗಳಿಂದಲೇ ದಿನನಿತ್ಯ ಸಾವಿರಾರು ಜನರು ಆಗಮಿಸುತ್ತಾರೆ. ಸದರಿ ಸುತ್ತಮುತ್ತಲಿನ ಜಿಲ್ಲೆಗಳಾದ ಹಾವೇರಿ, ಗದಗ, ಬೆಳಗಾವಿ, ಕಾರವಾರ, ಬಾಗಲಕೋಟೆ, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜು ಹಾಗೂ ಜಿಲ್ಲಾ ಆಸ್ಪತ್ರೆಗಳು ಇದ್ದರೂ ಸಹ ಇಲ್ಲಿಗೆ ಚಿಕಿತ್ಸೆಗಾಗಿ ರೋಗಿಗಳು ಕಳುಹಿಸುತ್ತಿದ್ದಾರೆ. ಇದರಿಂದಾಗಿ ಧಾರವಾಡ ಜಿಲ್ಲೆಯ ರೋಗಿಗಳಿಗೆ ಸರಿಯಾದ ರೀತಿಯ ಚಿಕಿತ್ಸೆ ದೊರೆಯುತ್ತಿಲ್ಲ ಹಾಗೂ ಸುತ್ತಮುತ್ತಲಿನ ಜಿಲ್ಲೆಯವರು ಗಂಭೀರವಾದ ಕಾಯಿಲೆಯನ್ನು ಹೊಂದಿರುವ ರೋಗಿಗಳನ್ನು ಕೊನೆಯ ಘಳಿಗೆಯಲ್ಲಿ ಹುಬ್ಬಳ್ಳಿಗೆ ಕಳುಹಿಸುತ್ತಾರೆ. ಹೀಗೆ ಕಳಿಸಿದಾಗ ಇನ್ನೂ ತಪಾಸಣೆ ಹಂತದಲ್ಲಿಯೇ ಇರುವಾಗಲೇ ಅನೇಕರು ಸಾವನ್ನಪ್ಪುತ್ತಿದ್ದಾರೆ. ಇದರಿಂದಾಗಿ ಈ ಸಂಸ್ಥೆಗೆ ಕೆಟ್ಟ ಹೆಸರು ಬರುತ್ತಿದೆ. ಅಲ್ಲದೇ ಸರಕಾರವು ಬಳ್ಳಾರಿ ವೈದ್ಯಕೀಯ ಸಂಸ್ಥೆಗೆ 125 ಕೋಟಿ, ಮೈಸೂರು ವೈದ್ಯಕೀಯ ಸಂಸ್ಥೆಗೆ 185 ಕೋಟಿ, ಬೆಂಗಳೂರು ವೈದ್ಯಕೀಯ ಸಂಸ್ಥೆಗೆ 275 ಕೋಟಿ ನೀಡಿ, ಹುಬ್ಬಳ್ಳಿಗೆ ಕೇವಲ 145 ಕೋಟಿ ಅನುದಾನ ನೀಡುತ್ತಿದೆ. ಇದರಿಂದಾಗಿ ಈ ಸಂಸ್ಥೆಯಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗದೇ ರೋಗಿಗಳಿಗೆ ಸರಿಯಾಗಿ ಚಿಕಿತ್ಸೆ ನೀಡಲು ಆಗುತ್ತಿಲ್ಲ. ಆದ್ದರಿಂದ ಈ ಸಂಸ್ಥೆ ಎದುರಿಸುತ್ತಿರುವ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಲು ಈ ಮೂಲಕ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

---

ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು (ಕಿಮ್ಸ್) ರಾಜ್ಯದ ಒಂದು ಪ್ರಮುಖ ಹಾಗೂ ಪ್ರತಿಷ್ಠಿತ ವೈದ್ಯಕೀಯ ಸ್ವಾಯತ್ತ ಸಂಸ್ಥೆಯಾಗಿರುತ್ತದೆ. ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯು ಸುಮಾರು 60 ವರ್ಷಗಳಷ್ಟು ಹಳೆಯ ಆಸ್ಪತ್ರೆಯಾಗಿದ್ದು, 1200 ಹಾಸಿಗೆ ಸಾಮರ್ಥ್ಯದೊಂದಿಗೆ ಹೃದ್ರೋಗ ಚಿಕಿತ್ಸಾ ಕೇಂದ್ರ, ಕ್ಯಾನ್ಸರ್ ಚಿಕಿತ್ಸಾ ಕೇಂದ್ರ, ಮಹಿಳಾ ಮತ್ತು ಮಕ್ಕಳ ವಿಭಾಗ, ನೆಫ್ರೋ-ಯುರಾಲಜಿ ವಿಭಾಗದ ಸೌಲಭ್ಯಗಳೊಂದಿಗೆ 24x7 ಡಯಾಲಿಸಿಸ್ ಸೇವೆ ಇತ್ಯಾದಿ ಸುಸಜ್ಜಿತ ಸೌಲಭ್ಯಗಳನ್ನು ಹೊಂದಿರುತ್ತದೆ.

ಬಳ್ಳಾರಿಯ ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯನ್ನು (ವಿಮ್ಸ್) ಹೊರತುಪಡಿಸಿ, ಉತ್ತರ ಕರ್ನಾಟಕ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯಕೀಯ ಕಾಲೇಜುಗಳು ಇತ್ತೀಚೆಗೆ ಪ್ರಾರಂಭಿಸಲಾದ ವೈದ್ಯಕೀಯ ಸಂಸ್ಥೆಗಳಾಗಿರುವುದರಿಂದ, ಈ ಸಂಸ್ಥೆಗಳಿಗೆ ಹೊಂದಿಕೊಂಡಿರುವ ಬೋಧಕ ಜಿಲ್ಲಾ ಆಸ್ಪತ್ರೆಗಳು ಹೆಚ್ಚಿನ ಸೂಪರ್ ಸ್ಪೆಷಾಲಿಟಿ ಸೌಲಭ್ಯಗಳನ್ನು ಹೊಂದಿರುವುದಿಲ್ಲ. ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಯು ಉತ್ತರ ಕರ್ನಾಟಕ ಭಾಗದ ಪ್ರತಿಷ್ಠಿತ ಆಸ್ಪತ್ರೆಯಾಗಿರುವುದರಿಂದ ಹಾಗೂ ಈ ಸಂಸ್ಥೆಯ ಹೃದ್ರೋಗ, ಕ್ಯಾನ್ಸರ್, ಲಿವರ್ ಹಾಗೂ ಮೂತ್ರಪಿಂಡ, ನರ ರೋಗ ಮುಂತಾದ ವಿಭಾಗಗಳಲ್ಲಿ ಸುಸಜ್ಜಿತ ಸೌಲಭ್ಯಗಳನ್ನು ಹೊಂದಿರುವುದರಿಂದ, ಇಂತಹ ಕಾಯಿಲೆಗಳಿಗೆ ಸೂಕ್ತ ಚಿಕಿತ್ಸೆ ಪಡೆಯಲು ಉತ್ತರ ಕರ್ನಾಟಕ ಭಾಗದ ಹಲವು ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ರೋಗಿಗಳು ಕಿಮ್ಸ್ ಆಸ್ಪತ್ರೆಗೆ ದಾಖಲಾಗುತ್ತಿದ್ದಾರೆ. ಈ ಆಸ್ಪತ್ರೆಯಲ್ಲಿ ವಾರ್ಷಿಕ ಅಂದಾಜು 4.84 ಲಕ್ಷ ಹೊರ ರೋಗಿಗಳು ಹಾಗೂ 50 ಸಾವಿರ ಒಳ ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದು, ರೋಗಿಗಳಿಗೆ ಗುಣಮಟ್ಟದ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಆದಾಗ್ಯೂ ಗಂಭೀರ ರೋಗಗಳಿಗೆ ತುತ್ತಾದ ಪ್ರಕರಣಗಳಲ್ಲಿ ರೋಗಿಗಳು ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪುತ್ತಿದ್ದಾರೆ.

ಕಿಮ್ಸ್, ಹುಬ್ಬಳ್ಳಿ ಸಂಸ್ಥೆಗೆ ಹೆಚ್ಚಿನ ಚಿಕಿತ್ಸೆಗಾಗಿ ಆಗಮಿಸುವ ರೋಗಿಗಳ ಹೊರೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಗುಲ್ಬರ್ಗಾ, ಬೆಳಗಾವಿ ಮತ್ತು ವಿಮ್ಸ್, ಬಳ್ಳಾರಿ ಇಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಪ್ರಾರಂಭಿಸಲಾಗುತ್ತಿದೆ. ಇದಲ್ಲದೆ, ಕಲಬುರಗಿಯಲ್ಲಿ ಹೃದ್ರೋಗ ಚಿಕಿತ್ಸಾ ಘಟಕ ಹಾಗೂ ಕ್ಯಾನ್ಸರ್ ಚಿಕಿತ್ಸಾ ಕೇಂದ್ರಗಳು ಈಗಾಗಲೇ ಕಾರ್ಯನಿರ್ವಹಿಸುತ್ತಿದ್ದು, ಹೆಚ್ಚಿನ ಸೌಲಭ್ಯಗಳನ್ನು ವಿಸ್ತರಿಸುವ ಸಲುವಾಗಿ ಹೊಸ 300 ಹಾಸಿಗೆ ಸಾಮರ್ಥ್ಯದ ಶ್ರೀ ಜಯದೇವ ಹೃದ್ರೋಗ ಆಸ್ಪತ್ರೆಯನ್ನು ರೂ.150.00 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಟ್ರಾಮಾ ಕೇರ್ ಕೇಂದ್ರವನ್ನು ಕಾರ್ಯಾರಂಭಗೊಳಿಸಲಾಗುತ್ತಿದ್ದು, ನೆಫ್ರೋ-ಯುರಾಲಜಿ ಹಾಗೂ ಮಹಿಳಾ ಮತ್ತು ಮಕ್ಕಳ ಕೇಂದ್ರವನ್ನು ಸಹ ಸ್ಥಾಪಿಸಲು ಕ್ರಮವಹಿಸಲಾಗಿದೆ. ಬೀದರ್‌ನಲ್ಲಿ ಹೃದ್ರೋಗ ಚಿಕಿತ್ಸಾ ಘಟಕವನ್ನು ಸ್ಥಾಪಿಸಲು ಅನುಮೋದನೆ ನೀಡಲಾಗಿದ್ದು, ಹಾವೇರಿ ಮತ್ತು ಯಾದಗಿರಿಯಲ್ಲಿಯೂ ಸಹ ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ಈಗಾಗಲೇ ಪೂರ್ವಭಾವಿ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ಎಲ್ಲಾ ಕ್ರಮಗಳಿಂದಾಗಿ ಮುಂದಿನ ದಿನಗಳಲ್ಲಿ ಕಿಮ್ಸ್, ಹುಬ್ಬಳ್ಳಿ ಈ ಆಸ್ಪತ್ರೆಗೆ ದಾಖಲಾಗುವ ರೋಗಿಗಳ ಸಂಖ್ಯೆಯು ಗಣನೀಯ ಪ್ರಮಾಣದಲ್ಲಿ ಇಳಿಮುಖವಾಗಲಿದೆ.

ಕಿಮ್ಸ್ ಸಂಸ್ಥೆಯಲ್ಲಿ ಹಾಲಿ ಇರುವ ಸೌಲಭ್ಯಗಳ ಜೊತೆಗೆ ಇನ್ನೂ ಹೆಚ್ಚಿನ ಗುಣಮಟ್ಟದ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಕ್ಯಾನ್ಸರ್ ಚಿಕಿತ್ಸಾ ಕೇಂದ್ರ ಹಾಗೂ ಹೃದ್ರೋಗ ಚಿಕಿತ್ಸಾ ಕೇಂದ್ರವನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ. ಬರ್ನ್ಸ್ ವಾರ್ಡ್ ಹಾಗೂ ಮಹಿಳಾ ಮತ್ತು ಮಕ್ಕಳ ವಿಭಾಗಗಳನ್ನು ಮೇಲ್ದರ್ಜೆಗೇರಿಸಿ ಕಾರ್ಯಾರಂಭಗೊಳಿಸಲಾಗಿದೆ. ಇದಲ್ಲದೆ, ಕಿಮ್ಸ್, ಸಂಸ್ಥೆಯಲ್ಲಿ ರೂ.150.00 ಕೋಟಿಗಳ ವೆಚ್ಚದಲ್ಲಿ 200 ಹಾಸಿಗೆ ಸಾಮರ್ಥ್ಯದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಮೆಡಿಕಲ್ / ಸರ್ಜಿಕಲ್ ಆಂಕಾಲಜಿ, ಮೆಡಿಕಲ್ / ಸರ್ಜಿಕಲ್ ಗ್ಯಾಸ್ಟ್ರೋ ಎಂಟ್ರಾಲಜಿ, ನ್ಯೂರಾಲಜಿ / ನ್ಯೂರೋ ಸರ್ಜರಿ, ನೆಫ್ರಾಲಜಿ / ಯುರಾಲಜಿ, ಕಾರ್ಡಿಯಾಲಜಿ / ಕಾರ್ಡಿಯೋಥೊರಾಸಿಕ್, ಪೀಡಿಯಾಟ್ರಿಕ್ ಸರ್ಜರಿ, ಪ್ಲಾಸ್ಟಿಕ್ ಸರ್ಜರಿ, ಎಂಡೋಕ್ರೈನಾಲಜಿ ವಿಭಾಗಗಳೊಂದಿಗೆ ಕಾರ್ಯಾರಂಭಗೊಳಿಸಲಾಗಿದೆ. ಇದರಿಂದಾಗಿ ಪ್ರಸ್ತುತ ಈ ಆಸ್ಪತ್ರೆಯಲ್ಲಿ ಹಾಲಿ ಇರುವ 1200 ಹಾಸಿಗೆಗಳ ಸೌಲಭ್ಯದ ಜೊತೆಗೆ ಹೆಚ್ಚುವರಿಯಾಗಿ 600 ಹಾಸಿಗೆಗಳ ಸೌಲಭ್ಯವನ್ನು ವಿಸ್ತರಿಸಲಾಗಿದೆ. ಇದಕ್ಕೆ ಪೂರಕವಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಅವಶ್ಯವಿರುವ 15 ಬೋಧಕ ಹಾಗೂ 400 ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಇದಕ್ಕಾಗಿ ಪ್ರಸಕ್ತ ಸಾಲಿನಲ್ಲಿ ವೇತನ ವೆಚ್ಚಗಳಿಗಾಗಿ ರೂ.50.00 ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಲು ಕ್ರಮವಹಿಸಲಾಗಿದೆ. ವೇತನೇತರ ವೆಚ್ಚಗಳಿಗೆ ಅವಶ್ಯವಿರುವ ಅನುದಾನವನ್ನು 2020-21 ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವೈದ್ಯಕೀಯ ಸಂಸ್ಥೆಗಳ ಆಸ್ಪತ್ರೆಗಳಿಗೆ ಆಯಾ ಸಂಸ್ಥೆಗಳು ಹೊಂದಿರುವ ಹಾಸಿಗೆ ಸಾಮರ್ಥ್ಯ (bed strength) ಹಾಗೂ ಕಾರ್ಯನಿರತ ಹುದ್ದೆಗಳಿಗೆ (working posts) ಅನುಗುಣವಾಗಿ ಅನುದಾನವನ್ನು ಒದಗಿಸಲಾಗುತ್ತಿದ್ದು, ಕಿಮ್ಸ್, ಹುಬ್ಬಳ್ಳಿ, ಸಂಸ್ಥೆಗೂ ಸಹ ಇದೇ ಮಾನದಂಡವನ್ನು ಅನುಸರಿಸಲಾಗುತ್ತಿದೆ.

ಕಿಮ್ಸ ಹುಬ್ಬಳ್ಳಿ ಈ ಸಂಸ್ಥೆಯಲ್ಲಿ ಹಾಲಿ ಇರುವ ಸೌಲಭ್ಯಗಳ ಜೊತೆಗೆ ಮೇಲ್ಕಂಡಂತೆ ಹೆಚ್ಚಿನ ಸೌಲಭ್ಯಗಳನ್ನು ವಿಸ್ತರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿರುವುದರಿಂದ ಮುಂದಿನ ದಿನಗಳಲ್ಲಿ ಹುಬ್ಬಳ್ಳಿ-ಧಾರವಾಡ ಭಾಗದ ರೋಗಿಗಳಿಗೆ ಸುಸಜ್ಜಿತ ಚಿಕಿತ್ಸಾ ಸೌಲಭ್ಯಗಳು ಲಭ್ಯವಾಗಲಿವೆ.

(ಡಾ:ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು

ಸಂಖ್ಯೆ:ಆಕುಕ 118 ಎಂಎಂಸಿ 2020